# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1565 (1840)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ಖಾಸಗಿ ಶಾಲಾ ಸಿಬ್ಬಂದಿಯವ ರಿಗೆ ಪರಿಹಾರ ಪ್ಯಾಕೇಜ್ ಘೋಷಣೆಯ ಕುರಿತು

(ಅ) ರಾಜ್ಯದಲ್ಲಿರುವ ಖಾಸಗಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕರೋನಾ ಲಾಕ್‌ಡೌನ್ ಸಂದರ್ಭದಲ್ಲಿ ಖಾಸಗಿ ಶಾಲೆಗಳಲ್ಲಿ ಸಂಬಳ ಮತ್ತು ಇತರೆ ಭತ್ಯೆಗಳನ್ನು ಪಾವತಿಸದೇ ಇರುವುದು ಮಾಧ್ಯಮಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸರ್ಕಾರದಿಂದ ಈ ಕುರಿತು ಪರಿಶೀಲನೆ ನಡೆಸಲಾಗಿದೆಯೇ ; (ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಇ) ಸರ್ಕಾರವು ಕರೋನಾ ಲಾಕ್‌ಡೌನ್ ಸಂದರ್ಭದಲ್ಲಿ ಸಂಕಷ್ಟಕ್ಕೆ ಒಳಗಾದ ದುಡಿಯುವ ವರ್ಗ ಮತ್ತು ಸಮುದಾಯಗಳಿಗೆ ಪರಿಹಾರ ಪ್ಯಾಕೇಜುಗಳನ್ನು ಘೋಷಿಸಿದ ರೀತಿಯಲ್ಲಿ ಖಾಸಗಿ ಶಿಕ್ಷಕ ಮತ್ತು ಶಿಕ್ಷಕಕ್ಷೇತ್ರ ವರ್ಗಕ್ಕೆ ರೂ. 10,000/- ಒಂದು ಬಾರಿ ಪರಿಹಾರ ಧನ ನೀಡುವ ಬಗ್ಗೆ ಚಿಂತನೆಯನ್ನು ಮಾಡುವುದಾಗಿ ಭರವಸೆ ನೀಡಿದ್ದು, ಈ ಬಗ್ಗೆ ಕ್ರಮ ತೆಗೆದುಕೊಳ್ಳಲಾಗಿದೆಯೇ ; ಆದೇಶದ ಪ್ರತಿ ಒದಗಿಸುವುದು; ಇಲ್ಲವಾದಲ್ಲಿ ಈ ಬಗ್ಗೆ ಯಾವಾಗ ಕ್ರಮವಹಿಸಲಾಗುವುದು ?